**National**
**Kannada**
**02.03.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ಮೂರು ದಿನಗಳ ಗುಜರಾತ್ ಪ್ರವಾಸ; ಇಂದು ಸೋಮನಾಥ ಟ್ರಸ್ಟ್ ಸಭೆಯಲ್ಲಿ ಭಾಗಿ
2. ಮಾದಕವಸ್ತು ಮುಕ್ತ ಭಾರತ ನಿರ್ಮಾಣದ ಪ್ರತಿಜ್ಞೆ ಕೈಗೊಳ್ಳುವಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಕರೆ
3. ರಾಷ್ಟ್ರ ರಾಜಧಾನಿಯಲ್ಲಿ 15 ವರ್ಷಕ್ಕಿಂತ ಹಳೆಯ ವಾಹನಗಳಿಗೆ ಪೆಟ್ರೋಲ್ ಬಂಕ್‌ಗಳಲ್ಲಿ ಇಂಧನ ನಿರ್ಬಂಧ ವಿಧಿಸಿ ದೆಹಲಿ ಸರ್ಕಾರ ಆದೇಶ
4. ಒಂದೇ 'ಎಪಿಕ್' ಸಂಖ್ಯೆ ಹೊಂದಿರುವವರು ನಕಲಿ ಅಥವಾ ಅಕ್ರಮ ಮತದಾರರಲ್ಲ – ಚುನಾವಣಾ ಆಯೋಗ ಸ್ಪಷ್ಟನೆ
5. ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್; ಇಂದು ಭಾರತ–ನ್ಯೂಜಿಲೆಂಡ್ ಮುಖಾಮುಖಿ

****************

ಪ್ರಧಾನಿ ನರೇಂದ್ರ ಮೋದಿ ಅವರು ಮೂರು ದಿನಗಳ ಭೇಟಿಗಾಗಿ ನಿನ್ನೆ ಸಂಜೆ ಗುಜರಾತ್‌ನ ಜಾಮ್‌ನಗರಕ್ಕೆ ಆಗಮಿಸಿದ್ದು, ಮುಂದಿನ ಎರಡು ದಿನ ಅವರು, ಹಲವು ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಇಂದು ಅವರು, ಜಾಮ್‌ನಗರದಲ್ಲಿರುವ ಅತ್ಯಾಧುನಿಕ ವನ್ಯಜೀವಿ ಸಂರಕ್ಷಣೆ ಮತ್ತು ಪುನರ್‌ವಸತಿ ಕೇಂದ್ರವಾದ ವಂತಾರಾಕ್ಕೆ ಭೇಟಿ ನೀಡಲಿದ್ದಾರೆ. ಸುಮಾರು 3 ಸಾವಿರ ಎಕರೆ ಪ್ರದೇಶದಲ್ಲಿ ವ್ಯಾಪಿಸಿರುವ ವಂತಾರಾ, ರಕ್ಷಿಸಲ್ಪಟ್ಟ ವನ್ಯಜೀವಿಗಳು ಹಾಗೂ ಅಳಿವಿನಂಚಿನಲ್ಲಿರುವ ಪ್ರಬೇಧಗಳಿಗೆ ಅಭಯಾರಣ್ಯವಾಗಿ ಕಾರ್ಯನಿರ್ವಹಿಸುತ್ತಿದೆ. ನಂತರ ಪ್ರಧಾನಿ, ಸಸನ್ ಗಿರ್ ರಾಷ್ಟ್ರೀಯ ಉದ್ಯಾನವನಕ್ಕೆ ಭೇಟಿ ನೀಡಲಿದ್ದಾರೆ.

ಬಳಿಕ ಅವರು ಸೋಮನಾಥ ದೇವಾಲಯಕ್ಕೆ ತೆರಳಲಿದ್ದು, ಬಳಿಕ ಸೋಮನಾಥ ಟ್ರಸ್ಟ್‌ನ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ.

ನಾಳೆ ಪ್ರಧಾನಿ, ಏಷ್ಯಾಟಿಕ್ ಸಿಂಹಗಳ ಏಕೈಕ ತಾಣವಾಗಿರುವ ಗಿರ್ ರಾಷ್ಟ್ರೀಯ ಉದ್ಯಾನವನಕ್ಕೆ ಭೇಟಿ ನೀಡಲಿದ್ದು, ಅರಣ್ಯ ಸಫಾರಿ ಕೈಗೊಳ್ಳಲಿದ್ದಾರೆ.

ಇದೇ ವೇಳೆ ಪ್ರಧಾನಿ, ಜುನಾಗಢ್ ಜಿಲ್ಲೆಯ ಸಾಸನ್‌ನಲ್ಲಿ ರಾಷ್ಟ್ರೀಯ ವನ್ಯಜೀವಿ ಮಂಡಳಿ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ವನ್ಯಜೀವಿ ಸಂರಕ್ಷಣಾ ನೀತಿಗಳು ಹಾಗೂ ರಾಷ್ಟ್ರೀಯ ಉದ್ಯಾನವನಗಳು ಹಾಗೂ ಅಭಯಾರಣ್ಯಗಳ ರಕ್ಷಣೆ ಕುರಿತು ಸಲಹೆ ನೀಡುವಲ್ಲಿ ಈ ಮಂಡಳಿ ಪ್ರಮುಖ ಪಾತ್ರವಹಿಸುತ್ತದೆ.

****************

ಕೇಂದ್ರ ಸರ್ಕಾರ, ಮಾದಕವಸ್ತು ಪಿಡುಗಿನ ವಿರುದ್ಧ ನಿಖರ ತನಿಖೆ ಹಾಗೂ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುತ್ತಿದ್ದು, ಮಾದಕವಸ್ತು ಮುಕ್ತ ಭಾರತ ನಿರ್ಮಾಣ ಕುರಿತಂತೆ ಪ್ರತಿಜ್ಞೆ ಮಾಡಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಕರೆ ನೀಡಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ದೇಶಾದ್ಯಂತ 12 ವಿವಿಧ ಪ್ರಕರಣಗಳಲ್ಲಿ 29 ಮಾದಕವಸ್ತು ಕಳ್ಳಸಾಗಾಣೆದಾರರನ್ನು ನ್ಯಾಯಾಲಯ ತಪ್ಪಿತಸ್ಥರೆಂದು ಘೋಷಿಸಿದೆ ಎಂದು ತಿಳಿಸಿದ್ದಾರೆ.

ಕೆಳಮಟ್ಟದಿಂದ ಮೇಲ್ಮಟ್ಟದವರೆಗೆ ಸಮಗ್ರ ತನಿಖೆಯ ಫಲವಾಗಿ ಈ ಸಾಧನೆ ಸಾಧ್ಯವಾಗಿದೆ. ಹಣಕ್ಕಾಗಿ ಯುವಕರನ್ನು ವ್ಯಸನಕ್ಕೆ ಸಿಲುಕಿಸುವ ಮಾದಕವಸ್ತು ಕಳ್ಳಸಾಗಣೆದಾರರನ್ನು ಶಿಕ್ಷಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ನಿರ್ಧಾಕ್ಷಿಣ್ಯ ಕ್ರಮ ಕೈಗೊಳ್ಳುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

***************

ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ವಾಯುಮಾಲಿನ್ಯವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಪ್ರಮುಖ ಕ್ರಮ ಕೈಗೊಂಡಿದ್ದು, ಇದೇ 31 ರ ನಂತರ 15 ವರ್ಷಕ್ಕಿಂತ ಹಳೆಯ ವಾಹನಗಳಿಗೆ ಪೆಟ್ರೋಲ್ ಬಂಕ್‌ಗಳಲ್ಲಿ ಇಂಧನ ಒದಗಿಸದೇ ಇರಲು ನಿರ್ಧರಿಸಿದೆ.

ವಾಯು ಮಾಲಿನ್ಯ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ದೆಹಲಿ ಪರಿಸರ ಸಚಿವ ಮಂಜಿಂದರ್ ಸಿಂಗ್ ಸಿರ್ಸಾ ಹಲವು ಮಾಲಿನ್ಯ ತಡೆ ಕ್ರಮಗಳನ್ನು ಘೋಷಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 15 ವರ್ಷಕ್ಕಿಂತ ಹಳೆಯ ವಾಹನಗಳನ್ನು ಗುರುತಿಸಲು ಪೆಟ್ರೋಲ್ ಬಂಕ್‌ಗಳಲ್ಲಿ ಆಧುನಿಕ ತಂತ್ರಜ್ಞಾನ ಆಧಾರಿತ ವ್ಯವಸ್ಥೆಯನ್ನು ಅಳವಡಿಸಲಾಗುತ್ತಿದೆ. ಅಂತಹ ವಾಹನಗಳನ್ನು ಗುರುತಿಸಲು ಹಾಗೂ ನಗರಕ್ಕೆ ಅವುಗಳ ಪ್ರವೇಶ ಮತ್ತು ನಿರ್ಗಮನವನ್ನು ನಿರ್ಬಂಧಿಸಲು ತಂಡವನ್ನು ರಚಿಸಲಾಗುವುದು ಎಂದು ತಿಳಿಸಿದರು.

ದೆಹಲಿ ವಿಮಾನ ನಿಲ್ದಾಣ, ಬಹುಮಹಡಿ ಕಟ್ಟಡಗಳು ಹಾಗೂ ಇತರ ದೊಡ್ಡ ಕಚೇರಿಗಳಲ್ಲಿ ವಾಯುಮಾಲಿನ್ಯ ನಿಯಂತ್ರಿಸಲು ಆಂಟಿಸ್ಮಾಗ್ ಗನ್‌ಗಳ ಅಳವಡಿಕೆಯನ್ನು ದೆಹಲಿ ಸರ್ಕಾರ ಕಡ್ಡಾಯಗೊಳಿಸಲಿದೆ ಎಂದು ಸಚಿವರು ಮಾಹಿತಿ ನೀಡಿದರು.

ಧ್ವನಿ: ಮಂಜಿಂದರ್ ಸಿಂಗ್, ದೆಹಲಿ ಪರಿಸರ ಸಚಿವ ( 17 ಸೆಕೆಂಡ್‌ಗಳು)

****************

ಒಂದೇ 'ಎಪಿಕ್' ಸಂಖ್ಯೆಯನ್ನು ಹೊಂದಿರುವವರು ನಕಲಿ ಅಥವಾ ಅಕ್ರಮ ಮತದಾರರು ಎಂಬ ಅರ್ಥವಲ್ಲ ಎಂದು ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ. ಎರಡು ವಿಭಿನ್ನ ರಾಜ್ಯಗಳ ಮತದಾರರು ಒಂದೇ ರೀತಿಯ 'ಎಪಿಕ್' ಸಂಖ್ಯೆಗಳನ್ನು ಹೊಂದಿರುವ ಸಮಸ್ಯೆಯನ್ನು ಕೆಲವು ಮಾಧ್ಯಮ ವರದಿಗಳು ಎತ್ತಿ ತೋರಿಸಿರುವ ಹಿನ್ನೆಲೆಯಲ್ಲಿ ಆಯೋಗ ಈ ವಿಷಯ ತಿಳಿಸಿದೆ.

ಕೆಲವು ಮತದಾರರ 'ಎಪಿಕ್' ಸಂಖ್ಯೆಗಳು ಒಂದೇ ಆಗಿರಬಹುದು, ಜನಸಂಖ್ಯಾ ವಿವರಗಳು, ವಿಧಾನಸಭಾ ಕ್ಷೇತ್ರ ಮತ್ತು ಮತಗಟ್ಟೆ ಸೇರಿದಂತೆ ಇತರ ವಿವರಗಳು ಒಂದೇ 'ಎಪಿಕ್' ಸಂಖ್ಯೆ ಹೊಂದಿರುವ ಮತದಾರರಿಗೆ ವಿಭಿನ್ನವಾಗಿವೆ ಎಂದು ಆಯೋಗ ಸ್ಪಷ್ಟಪಡಿಸಿದೆ. ಯಾವುದೇ ಮತದಾರರು ತಮ್ಮ ರಾಜ್ಯ ಅಥವಾ ಕೇಂದ್ರಾಡಳಿತ ಪ್ರದೇಶದಲ್ಲಿ ತಮ್ಮ ಗೊತ್ತುಪಡಿಸಿದ ಮತಗಟ್ಟೆಯಲ್ಲಿ ಮಾತ್ರ ಮತ ಚಲಾಯಿಸಬಹುದು, ಅಲ್ಲಿ ಅವರು ಮತದಾರರ ಪಟ್ಟಿಯಲ್ಲಿ ದಾಖಲಾಗಿರುತ್ತಾರೆ ಮತ್ತು ಬೇರೆಲ್ಲಿಯೂ ಇರುವುದಿಲ್ಲ ಎಂದು ಆಯೋಗ ತಿಳಿಸಿದೆ.

ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಕೆಲವು ಮತದಾರರಿಗೆ ಒಂದೇ ರೀತಿಯ 'ಎಪಿಕ್' ಸಂಖ್ಯೆಯನ್ನು ಹಂಚಿಕೆ ಮಾಡಲಾಗಿದ್ದು, ಮತದಾರರ ಪಟ್ಟಿಯ ದತ್ತಾಂಶವನ್ನು ರೊನೆಟ್ ವೇದಿಕೆಗೆ ವರ್ಗಾಯಿಸುವ ಮೊದಲು ವಿಕೇಂದ್ರೀಕೃತ ಮತ್ತು ಹಸ್ತಚಾಲಿತ ಕಾರ್ಯವಿಧಾನವನ್ನು ಅನುಸರಿಸಲಾಗುತ್ತಿದೆ ಎಂದು ಚುನಾವಣಾ ಆಯೋಗ ಹೇಳಿದೆ.

ಇದರ ಪರಿಣಾಮವಾಗಿ ಕೆಲವು ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಸಿಇಓ ಕಚೇರಿಗಳು ಒಂದೇ 'ಎಪಿಕ್' ಆಲ್ಫಾನ್ಯೂಮರಿಕ್ ಸರಣಿಯನ್ನು ಬಳಸುತ್ತಿವೆ ಮತ್ತು ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿನ ಮತದಾರರಿಗೆ ನಕಲಿ 'ಎಪಿಕ್' ಸಂಖ್ಯೆಗಳನ್ನು ಹಂಚಿಕೆ ಮಾಡುವ ಸಾಧ್ಯತೆಗೆ ಅವಕಾಶವಿದೆ.

ಯಾವುದೇ ಆತಂಕಗಳನ್ನು ನಿವಾರಿಸಲು, ನೋಂದಾಯಿತ ಮತದಾರರಿಗೆ ವಿಶಿಷ್ಟ 'ಎಪಿಕ್' ಸಂಖ್ಯೆಯ ಹಂಚಿಕೆಯನ್ನು ಖಚಿತ ಪಡಿಸಿಕೊಳ್ಳಲು ಆಯೋಗವು ನಿರ್ಧರಿಸಿದೆ ಎಂದು ತಿಳಿಸಲಾಗಿದೆ. ನಕಲಿ 'ಎಪಿಕ್' ಸಂಖ್ಯೆಯ ಯಾವುದೇ ಪ್ರಕರಣವನ್ನು ಅನನ್ಯ 'ಎಪಿಕ್' ಸಂಖ್ಯೆಯನ್ನು ನಿಗದಿಪಡಿಸುವ ಮೂಲಕ ಸರಿಪಡಿಸಲಾಗುತ್ತದೆ. ಈ ಪ್ರಕ್ರಿಯೆಯಲ್ಲಿ ಸಹಾಯ ಮಾಡಲು ಮತ್ತು ಸಹಾಯ ಮಾಡಲು ಎರೊನೆಟ್ **2.0** ವೇದಿಕೆಯನ್ನು ನವೀಕರಿಸಲಾಗುವುದು ಎಂದು ಆಯೋಗ ಸ್ಪಷ್ಟಪಡಿಸಿದೆ.

****************

ಉತ್ತರಾಖಂಡದ ಚಮೋಲಿ ಜಿಲ್ಲೆಯ ಮಾನಾ ಗ್ರಾಮದಲ್ಲಿ ಸಂಭವಿಸಿದ ಹಿಮಪಾತದಲ್ಲಿ ಸಿಲುಕಿದ್ದ **51** ಕಾರ್ಮಿಕರನ್ನು ರಕ್ಷಿಸಲಾಗಿದ್ದು, ಇನ್ನು ಉಳಿದ **4** ಜನರಿಗಾಗಿ ಶೋಧ ಕಾರ್ಯ ಮುಂದುವರಿದಿದೆ. ಇದೇ ವೇಳೆ ಗಾಯಗೊಂಡ ನಾಲ್ವರು ಕಾರ್ಮಿಕರು ಮೃತಪಟ್ಟಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಉತ್ತರಾಖಂಡ್ ವಿಪತ್ತು ನಿರ್ವಹಣಾ ಕಾರ್ಯದರ್ಶಿ ವಿನೋದ್ ಕುಮಾರ್ ಸುಮನ್, ಹಿಮಪಾತದಲ್ಲಿ ಸಿಲುಕಿರುವ ನಾಲ್ವರನ್ನು ಪತ್ತೆ ಹಚ್ಚಲು ಶೋಧ ಕಾರ್ಯ ಮುಂದುವರೆದಿದೆ ಎಂದು ತಿಳಿಸಿದ್ದಾರೆ.

ಈ ನಡುವೆ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ, ಮುಂದಿನ ಮೂರು ದಿನಗಳವರೆಗೆ ಔಲಿ ಮತ್ತು ಹರ್ಸಿಲ್ ಪ್ರದೇಶಗಳಿಗೆ ಪ್ರಯಾಣ ಕೈಗೊಳ್ಳದಂತೆ ಪ್ರವಾಸಿಗರಿಗೆ ಮನವಿ ಮಾಡಿದ್ದಾರೆ.

ಉತ್ತರಾಖಂಡ ರಾಜ್ಯಾದ್ಯಂತ ಮುಂದಿನ ವಾರ ಹಲವೆಡೆ ಸಾಮಾನ್ಯ ವಾತಾರವರಣವಿರಲಿದ್ದು, ಕೆಲವೆಡೆ ಲಘು ಮಳೆ ಹಾಗೂ ಹಿಮಪಾತವಾಗುವ ಸಂಭವವಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

****************

ದೇಶಾದ್ಯಂತ ಇಂದಿನಿಂದ ರಂಜಾನ್ ಹಬ್ಬವನ್ನು ಸಡಗರ-ಸಂಭ್ರಮದಿಂದ ಆಚರಿಸಲಾಗುತ್ತಿದೆ. ಪವಿತ್ರ ರಂಜಾನ್ ತಿಂಗಳ ಉಪವಾಸ ವ್ರತಾಚರಣೆಯನ್ನು, ಮುಸ್ಲಿಂ ಬಾಂಧವರು ಇಂದಿನಿಂದ ಆರಂಭಿಸಿದ್ದಾರೆ. ಪವಿತ್ರ ರಂಜಾನ್ ತಿಂಗಳಲ್ಲಿ, ನಮಾಜ್-ಪ್ರಾರ್ಥನೆ, ರೋಝಾ -ಉಪವಾಸ, ಹಾಗೂ ಜಕಾತ್- ದಾನಕ್ಕೆ ಹೆಚ್ಚು ಪ್ರಾಮುಖ್ಯವಿದೆ. ನೆಮ್ಮದಿ ಹಾಗೂ ಸಾಮರಸ್ಯದ ಬದುಕಿಗಾಗಿ ಪ್ರಾರ್ಥಿಸಲಾಗುತ್ತದೆ. ರಂಜಾನ್, ಇಸ್ಲಾಮ್ ಕ್ಯಾಲೆಂಡರ್‌ನ **9**ನೇ ತಿಂಗಳಾಗಿದ್ದು, ಈ ತಿಂಗಳ ಅಂತ್ಯದಲ್ಲಿ ಈದ್ ಉಲ್ ಫಿತರ್ ಅನ್ನ ಆಚರಿಸಲಾಗುತ್ತದೆ.

ಪವಿತ್ರ ರಂಜಾನ್ ಮಾಸದ ಆರಂಭದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ದೇಶದ ಜನತೆಗೆ ಶುಭಾಶಯ ಕೋರಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್ ಮಾಡಿರುವ ಪ್ರಧಾನಿ, ಈ ಪವಿತ್ರ ತಿಂಗಳು, ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆಯನ್ನು ತರಲಿ ಎಂದು ಹಾರೈಸಿದ್ದಾರೆ.

ಪವಿತ್ರ ರಂಜಾನ್ ತಿಂಗಳು ಪ್ರತಿಬಿಂಬ, ಕೃತಜ್ಞತೆ ಮತ್ತು ಭಕ್ತಿಯನ್ನು ಪ್ರತಿನಿಧಿಸುತ್ತದೆ ಮತ್ತು ದೇಶವಾಸಿಗಳಿಗೆ ಸಹಾನುಭೂತಿ, ದಯೆ ಮತ್ತು ಸೇವೆಯ ಮೌಲ್ಯಗಳನ್ನು ನೆನಪಿಸುತ್ತದೆ ಎಂದು ಪ್ರಧಾನಿ ಪ್ರತಿಪಾದಿಸಿದ್ದಾರೆ.

****************

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಪಂದ್ಯಾವಳಿಯ ತನ್ನ ಕೊನೆಯ ಗುಂಪು ಹಂತದ ಪಂದ್ಯದಲ್ಲಿ ಭಾರತ ನ್ಯೂಜಿಲೆಂಡ್ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ 2.30 ಕ್ಕೆ ಆರಂಭವಾಗಲಿದೆ. ಪಂದ್ಯ ಭಾರತೀಯ ಕಾಲಮಾನ ಅಪರಾಹ್ನ 2.30ಕ್ಕೆ ಆರಂಭವಾಗಲಿದೆ.

ಉಭಯ ತಂಡಗಳು ಈಗಾಗಲೇ ಸೆಮಿಫೈನಲ್ ಹಂತಕ್ಕೆ ಅರ್ಹತೆ ಪಡೆದಿದ್ದು, ಸತತ ಐದು ಗೆಲುವಿನ ಭರವಸೆಯೊಂದಿಗೆ ಕಣಕ್ಕಿಳಿಯುತ್ತಿವೆ. ಈ ಪಂದ್ಯದಲ್ಲಿ ಗೆಲುವು ಸಾಧಿಸುವ ತಂಡ 'ಎ' ಗುಂಪಿನ ಅಂಕಪಟ್ಟಿಯಲ್ಲಿ ಅಗ್ರ ಸ್ಥಾನಕ್ಕೇರಲಿದೆ.

ಭಾರತ, ಈ ಪಂದ್ಯ ಗೆದ್ದು, ಅಂಕಪಟ್ಟಿಯಲ್ಲಿ ಅಗ್ರ ಸ್ಥಾನಕ್ಕೇರಿದಲ್ಲಿ ಮಾರ್ಚ್ 4 ರಂದು ನಡೆಯಲಿರುವ ಪಂದ್ಯದಲ್ಲಿ ಆಸ್ಟ್ರೇಲಿಯಾವನ್ನು ಎದುರಿಸಲಿದ್ದರೆ, ಮಾರ್ಚ್ 5 ರಂದು ನಡೆಯಲಿರುವ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡ ದಕ್ಷಿಣ ಆಫ್ರಿಕಾ ತಂಡವನ್ನು ಎದುರಿಸಲಿದೆ.

****************

ಚಿಲಿಯ ಸ್ಯಾಂಟಿಯಾಗೊದಲ್ಲಿ ನಡೆದ ಚಿಲಿ ಓಪನ್ ಟೆನಿಸ್ ಟೂರ್ನಿಯಲ್ಲಿ ಭಾರತದ ಋತ್ವಿಕ್ ಚೌಧರಿ ಬೊಳ್ಳಿಪಲ್ಲಿ ಹಾಗೂ ಕೊಲಿಂಬಿಯಾದ ನಿಕೋಲಸ್ ಬೆರಿಯಾಂಟೊಸ್ ಜೋಡಿ, ಪುರುಷರ ಡಬಲ್ಸ್ ವಿಭಾಗದ ಪ್ರಶಸ್ತಿಯನ್ನು ಗೆದ್ದುಕೊಂಡಿದೆ.

ಈ ಜೋಡಿ, ಅಗ್ರ ಶ್ರೇಯಾಂಕಿತ ಅರ್ಜೆಂಟಿನಾದ ಮ್ಯಾಗ್ನಿಮೊ ಗೊನ್ಸಲೆಸ್ ಮತ್ತು ಆ್ಯಂಡ್ರೆಸ್ ಮಾಲ್ಟೆನಿ ವಿರುದ್ಧ 6–3, 6–2 ನೇರ ಸೆಟ್‌ಗಳ ಅಂತರದಲ್ಲಿ ಗೆಲುವು ಸಾಧಿಸಿದೆ.

****************

ಬೆಂಗಳೂರು ಓಪನ್ ಟೆನಿಸ್‌ನಲ್ಲಿ, ಅಗ್ರ ಶ್ರೇಯಾಂಕದ ಅನಿರುದ್ಧ್ ಚಂದ್ರಶೇಖರ್ ಮತ್ತು ರೇ ಹೋ ಪುರುಷರ ಡಬಲ್ಸ್ ಪ್ರಶಸ್ತಿ ಗೆದ್ದುಕೊಂಡಿದ್ದಾರೆ. ನಿನ್ನೆ ಕೆಎಸ್‌ಎಲ್‌ಟಿಎ ಟೆನಿಸ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಇಂಡೋ–ತೈವಾನೀಸ್ ಜೋಡಿ ಆಸ್ಟ್ರೇಲಿಯಾದ ಬ್ಲೇಕ್ ಬೇಲ್ಡನ್ ಮತ್ತು ಮ್ಯಾಥ್ಯೂ ಕ್ರಿಸ್ಟೋಫರ್ ರೊಮಿಯೊಸ್ ಅವರನ್ನು 6–2, 6–4 ಸೆಟ್‌ಗಳಿಂದ ಸೋಲಿಸಿತು.

****************

ವಡೋದರದಲ್ಲಿ ನಡೆದ ಡಬ್ಲ್ಯುಟಿಟಿ ಯೂತ್ ಕಂಟೆಂಡರ್ ಟೇಬಲ್ ಟೆನಿಸ್ ಪಂದ್ಯಾವಳಿಯಲ್ಲಿ 24 ಪ್ರಶಸ್ತಿಗಳಲ್ಲಿ 22 ಪ್ರಶಸ್ತಿಗಳನ್ನು ಭಾರತ ಗೆದ್ದುಕೊಂಡಿದೆ.

19 ವರ್ಷದೊಳಗಿನವರ ಯುವಕರ ವಿಭಾಗದಲ್ಲಿ ಅಂಕುರ್ ಭಟ್ಟಾಚಾರ್ಜೀ ಅಭಿನಂದ್ ಪ್ರಧಿವಧಿ ವಿರುದ್ಧ 3–0 ಅಂತರದಲ್ಲಿ ಗೆಲುವು ಸಾಧಿಸಿ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ.

ಹೆಣ್ಣಮಕ್ಕಳ ವಿಭಾಗದಲ್ಲಿ ಭಾರತ, ದಿವ್ಯಾಂಶಿ ಭೌಮಿಕ್ 15 ವರ್ಷದೊಳಗಿನ ಹಾಗೂ 17 ವರ್ಷದೊಳಗಿನವರ ವಿಭಾಗದಲ್ಲಿ ಚಿನ್ನ ಹಾಗೂ 15 ವರ್ಷದೊಳಗಿನವರ ಮಿಶ್ರ ವಿಭಾಗದಲ್ಲಿ ಬೆಳ್ಳಿ ಪದಕ ಗೆದ್ದು, ಟೂರ್ನಿಯಲ್ಲಿ ಅತಿ ಹೆಚ್ಚು ಪದಕ ಪಡೆದ ಭಾರತೀಯ ಆಟಗಾರ್ತಿ ಎಂಬ  ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಭಾರತದಲ್ಲಿ ಈ ಟೂರ್ನಿ ಮೊದಲ ಬಾರಿಗೆ ಆಯೋಜಿಸಲಾಗಿದ್ದು, ದೇಶದ ಪಾಲಿಗೆ ಒಂದು ಐತಿಹಾಸಿ ಮೈಲುಗಲ್ಲಾಗಿದೆ.

*********ಮುಕ್ತಾಯ*******